ಆ) ತನಿಖೆ ಪ್ರಗತಿಯಲ್ಲಿದ್ದು, ಬ್ಯಾಂಕಿನಲ್ಲಿಟ್ಟಿರುವ ಹಣ ಕಾಮಗಾರಿಗಳ ಅನುಷ್ಠಾನಕ್ಕೆ ಬಿಡುಗಡೆ ಮಾಡಿದ ಅನುದಾನವಾಗಿದೆ. ವಿವರ ಅಂತಿಮ ವರದಿ ನಂತರ ಲಭ್ಯವಾಗುವುದು.

ಇ)

1. ಈ ಪ್ರಕರಣ ಸಂಬಂಧ ಶ್ರೀ ರಾಮಕೃಷ್ಣ, ಉಪಕಾರ್ಯದರ್ಶಿ, ಗ್ರಾಮೀಣ ನೀರು ಸರಬರಾಜು, ಇವರನ್ನು ಅಮಾನತ್ತಿನಲ್ಲಿ ಇಡಲಾಗಿದೆ.
2. ಶ್ರೀ ಪುನಟಿ ಶ್ರೀಧರ್, ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಅಭಿವೃದ್ಧಿ ಸಂಸ್ಥೆರವರ ಅಧ್ಯಕ್ಷತೆಯಲ್ಲಿ ಒಟ್ಟು ನಾಲ್ಕು ಅಧಿಕಾರಿಗಳನ್ನೊಳಗೊಂಡ ತನಿಖಾ ಸಮಿತಿ ನೇಮಿಸಿದೆ.
3. ಸಮಿತಿ 2 ಮಧ್ಯಂತರ ವರದಿ ಸಲ್ಲಿಸಿದೆ.
4. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಆರ್ಥಿಕ ಶಿಸ್ತನ್ನು ಉತ್ತಮಗೊಳಿಸಲು ಕೆಲವು ನಿರ್ಣಯಗಳನ್ನು ಕೈಗೊಂಡು, ಇವುಗಳನ್ನು ಕಡ್ಡಾಯವಾಗಿ ಕಾರ್ಯರೂಪಕ್ಕೆ ತರಲು ಕ್ರಮವಿಡಲಾಗಿದೆ.

ಶೌಚಾಲಯಗಳ ನಿರ್ಮಾಣದಲ್ಲಿ ಅವ್ಯವಹಾರ

3149 (2560); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮಿ ಲೇಔಟ್)

ಅ) ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ ಎಷ್ಟು ಶೌಚಾಲಯ ನಿರ್ಮಾಣಗೊಂಡಿರುತ್ತದೆ; ಅವುಗಳಲ್ಲಿನ ಬಹುತೇಕ ಕಾಮಗಾರಿಗಳು ಕಳಪೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇದಕ್ಕಾಗಿ ಮೀಸಲಾಗಿಟ್ಟ ಹಣವನ್ನು ದುರುಪಯೋಗ ಪಡಿಸಿಕೊಂಡಿರುವುದು ನಿಜವಲ್ಲವೇ;

ಇ) ಇದಕ್ಕಾಗಿ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ ಹಾಗೂ ದುರುಪಯೋಗದ ಪ್ರಕರಣದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು;

ಶ್ರೀ ಹೆಚ್.ಕೆ. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ 2005 ರಿಂದ ಜೂನ್–2015ರ ವರೆಗೆ ಅನುಷ್ಠಾನಗೊಂಡಿರುವ ವಿವಿಧ ಯೋಜನೆಗಳಾದ ಸಂಪೂರ್ಣ ಸ್ವಚ್ಚತಾ ಆಂದೋಲನ, ನಿರ್ಮಲ ಭಾರತ ಅಭಿಯಾನ ಹಾಗೂ ಸ್ವಚ್ಚ ಭಾರತ್ ಮಿಷನ್ (ಜೂನ್–2015)ರವರೆಗೆ ಒಟ್ಟಾರೆ 44.85 ಲಕ್ಷ ವೈಯಕ್ತಿಕ ಗೃಹ ಶೌಚಾಲಯಗಳು ನಿರ್ಮಾಣಗೊಂಡಿರುತ್ತವೆ.

ಈ ಯೋಜನೆಯು ಬೇಡಿಕೆ ಆಧಾರಿತ ಕಾರ್ಯಕ್ರಮವಾಗಿದ್ದು, ಜನರಲ್ಲಿ ಬಯಲು ಬಹಿರ್ದೆಸೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಿ ಪ್ರತಿಯೊಬ್ಬರು ಶೌಚಾಲಯ ನಿರ್ಮಿಸಿ ಬಳಸುವಂತೆ ಮಾಡುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿರುತ್ತದೆ. ಫಲಾನುಭವಿಗಳೇ ಸ್ವತಃ ಶೌಚಾಲಯ ನಿರ್ಮಿಸಿಕೊಳ್ಳಬೇಕಾಗಿದ್ದು, ಶೌಚಾಲಯ ನಿರ್ಮಿಸಿ ಬಳಸುವಂತೆ ಪ್ರೋತ್ಸಾಹಿಸಲು, ಶೌಚಾಲಯ ನಿರ್ಮಿಸಿದ ನಂತರ ಅರ್ಹ ಕುಟುಂಬಗಳಿಗೆ ಈ ಯೋಜನೆಯಡಿ ಪ್ರೋತ್ಸಾಹಧನವನ್ನು ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುತ್ತಿದೆ. ಫಲಾನುಭವಿಗಳಿಗೆ ಉತ್ತಮ ಗುಣಮಟ್ಟದಲ್ಲಿ ಶೌಚಾಲಯಗಳ ನಿರ್ಮಾಣ ಮಾಡಿಕೊಳ್ಳಲು ಸಲಹೆ ಹಾಗೂ ಸೂಚನೆಗಳನ್ನು ನೀಡಲಾಗಿದೆ.

ಆ) ದುರುಪಯೋಗದ ಪ್ರಕರಣಗಳಿಗೆ ಸಂಬಂಧಿಸಿದಂತೆ ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ.

ಇ) 2005 ರಿಂದ ಜೂನ್–2015ರ ವರೆಗೆ ಅನುಷ್ಠಾನಗೊಂಡಿರುವ ವಿವಿಧ ಯೋಜನೆಗಳಾದ ಸಂಪೂರ್ಣ ಸ್ವಚ್ಚತಾ ಆಂದೋಲನ, ನಿರ್ಮಲ

ಭಾರತ ಅಭಿಯಾನ ಹಾಗೂ ಸ್ವಚ್ಛ ಭಾರತ್ ಮಿಷನ್ ಯೋಜನೆಗಳಲ್ಲಿ ಈವರೆವಿಗೂ ರೂ. 1377.21 ಕೋಟಿಗಳನ್ನು ಖರ್ಚು ಮಾಡಲಾಗಿದೆ. ದುರುಪಯೋಗದ ಪ್ರಕರಣಗಳಿಗೆ ಸಂಬಂಧಿಸಿದಂತೆ ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ.

ಜಾನಪದ ಪದವೀಧರರಿಗೆ ಉದ್ಯೋಗಾವಕಾಶ

3150 (2561); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮಿ ಲೇಔಟ್)

ಅ) ರಾಜ್ಯದಲ್ಲಿ ಜಾನಪದ ವಿಶ್ವವಿದ್ಯಾಲಯವು ಯಾವಾಗ ಪ್ರಾರಂಭವಾಯಿತು; ಇದು ಕಾರ್ಯನಿರ್ವಹಿಸುತ್ತಿರುವ ಸ್ಥಳ ಯಾವುದು;

ಆ) ಕಳೆದ ಮೂರು ವರ್ಷಗಳಿಂದ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಜಾನಪದ ಎಂ.ಎ., ಪದವಿ ಪಡೆದವರ ಸಂಖ್ಯೆ ಎಷ್ಟು; (ವರ್ಷವಾರು, ವಿಶ್ವವಿದ್ಯಾಲಯವಾರು ವಿವರ ನೀಡುವುದು)

ಇ) ಜಾನಪದ ಸ್ನಾತಕೋತ್ತರ ಪದವಿ ಪಡೆದವರಿಗೆ ಉದ್ಯೋಗ ಕಲ್ಪಿಸಿಕೊಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು)

ಅ) ಕರ್ನಾಟಕ ಜಾನಪದ ವಿಶ್ವವಿದ್ಯಾಲಯವನ್ನು ದಿನಾಂಕ 23–02–2012 ರಂದು ಪ್ರಾರಂಭಿಸಲಾಗಿದ್ದು, ಪ್ರಸ್ತುತ ಹಾವೇರಿ ಜಿಲ್ಲೆಯ ಗೊಟಗೋಡಿಯಲ್ಲಿ ಕಾರ್ಯನಿರ್ವಹಿಸುತ್ತಿದೆ.

ಆ) ಈ ಕೆಳಕಂಡ ವಿಶ್ವವಿದ್ಯಾಲಯಗಳಲ್ಲಿ ಜಾನಪದ ಎಂ.ಎ. ಪದವಿ ಪಡೆದವರ ಸಂಖ್ಯೆ ಹಾಗೂ ವಿವರಗಳು ಈ ಕೆಳಕಂಡಂತಿವೆ;